ಅಸಲು ದಾವೆ ನಂಃ 346/2017 ಪಿ.ಡಬ್ಲ್ಯೂಃ4- ಗೋವಿಂದ ಹುಡೇದಮನಿ ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ 12-04-2023 ರಂದು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಸ್ ವಿ ಸಿ ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿ ಇರುತ್ತೇನೆ. ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ವಿಷಯಗಳು ನನಗೆ ತಿಳಿದ ಮಾಹಿತಿಯಂತೆ ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನಾನು ನೀಡಿದ ಮಾಹಿತಿ ಮೇರೆಗೆ ತಯಾರಿಸಲಾಗಿರುತ್ತದೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು , ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ದಿಃ 25/02/2011 ರಂದು ಆದಂತಹ ಮೂಲ ಖರೀದಿ ಪತ್ರ ನೋಡುತ್ತಿದ್ದೇನೆ. ಅದು ಈಗಾಗಲೇ ನಿಪಿಃ 2 ಎಂದು ಗುರುತಿಸಲಾಗಿದೆ. ಸದರಿ ಪತ್ರವನ್ನು ನಾನು ಗಣಕೀಕರಣ ಮಾಡಿಸಿದ್ದೇನೆ. ಅದರಲ್ಲಿ ನನ್ನ ಸಹಿ ಇದೆ. ಸಾಕ್ಷಿ ತನ್ನ ಸಹಿಯನ್ನು ನೋಡಿ ಒಪ್ಪಿದ್ದರಿಂದ, ಅದನ್ನು ನಿಪಿಃ 2(ಎ) ಎಂದು ಗುರುತಿಸಲಾಯಿತು. ಸದರಿ ಪತ್ರವನ್ನು ನೀಲಪ್ಪ ಇವರಿಗೆ ಚಳಪ್ಪ ರೋಖಡೆ ಇವರು ಬರೆಸಿಕೊಟ್ಟಿರುತ್ತಾರೆ.

**ಪಾಟೀ ಸವಾಲುಃ- ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ.ಹೇ.ಕೇ. ಸರಿ ಅದೆ.

**( ಆದಿತ್ಯ ಆರ್ ಕಲಾಲ್ )**
**ಹೆಚ್ಚುವರಿ ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ**
**ನ್ಯಾಯಾಧೀಶರು ರೋಣ.**